ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**25.12.2025** **1.10 pm**

**<><*<><>*><>**

**೧. ಚಿತ್ರದುರ್ಗದಲ್ಲಿ ಭೀಕರ ರಸ್ತೆ ಅಪಘಾತ ; ಐವರ ಸಾವು, ೨೫ಕ್ಕೂ ಅಧಿಕ ಮಂದಿಗೆ ಗಾಯ ; ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸಂತಾಪ**

**೨. ಇಂದು ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಜನ್ಮ ದಿನ ; ಉತ್ತಮ ಆಡಳಿತ ದಿನವಾಗಿ ದೇಶಾದ್ಯಂತ ಆಚರಣೆ**

**೩. ಇಂದು ಜಗತ್ತಿನಾದ್ಯಂತ ಸಡಗರದ ಕ್ರಿಸ್‌ಮಸ್ ಹಬ್ಬ ; ಶಾಂತಿ, ಸೌಹಾರ್ದತೆ, ಸಮಾನತೆಯ ಸೇವಾ ಗುಣಗಳ ಸ್ಮರಣೆ**

**೪. ಸಂಸದರ ಖೇಲೋ ಮಹೋತ್ಸವದಿಂದ ದೇಶದಲ್ಲಿ ಉತ್ತಮ ಪ್ರತಿಭೆಗಳ ಪತ್ತೆಗೆ ನೆರವು - ಪ್ರಧಾನಿ**

**೫. ೮೭ನೇ ಹಿರಿಯರ ರಾಷ್ಟ್ರೀಯ ಬ್ಯಾಡ್ಮಿಂಟನ್ ಟೂರ್ನಿ ; ಉನ್ನತಿ ಹೂಡಾ, ತನ್ವಿ ಶರ್ಮಾ, ರೌನಕ್ ಚೌಹಾಣ್, ಸಂಸ್ಕಾರ್ ಸಾರಸ್ವತ್ ಮುನ್ನಡೆ**

**<><*<><>*><>**

ಬೆಂಗಳೂರಿನಿಂದ ಗೋಕರ್ಣಕ್ಕೆ ತೆರಳುತ್ತಿದ್ದ ಖಾಸಗಿ ಬಸ್‌ಗೆ ಕಂಟೈನರ್ ಲಾರಿ ಡಿಕ್ಕಿ ಹೊಡೆದ ಪರಿಣಾಮ ಒಂಬತ್ತು ಮಂದಿ ಸಾವನ್ನಪ್ಪಿರುವ ದುರ್ಘಟನೆ ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲ್ಲೂಕಿನ ಜವಗೊಂಡನಹಳ್ಳಿ ಬಳಿ ಸಂಭವಿಸಿದೆ. ೩೨ ಜನ ಪ್ರಯಾಣಿಕರು ಬಸ್‌ನಲ್ಲಿ ಪ್ರಯಾಣಿಸುತ್ತಿದ್ದು, ೨೫ ಮಂದಿ ಗಾಯಗೊಂಡಿದ್ದಾರೆ. ಬೆಂಗಳೂರಿನಿಂದ ಗೋಕರ್ಣದ ಕಡೆಗೆ ತೆರಳುತ್ತಿದ್ದಾಗ ಹಿರಿಯೂರು ಸಮೀಪದ ರಾಷ್ಟ್ರೀಯ ಹೆದ್ದಾರಿ ೪೮ರಲ್ಲಿ ಅಪಘಾತಕ್ಕೀಡಾಗಿದೆ. ಆಗ ಬಸ್ ಹೊತ್ತಿ ಉರಿದ ಪರಿಣಾಮ ಬಸ್‌ನಲ್ಲಿದ್ದ ಎಂಟು ಮಂದಿ ಕಂಟೈನರ್ ಲಾರಿ ಚಾಲಕ ಸೇರಿ ಒಂಭತ್ತು ಮಂದಿ ಸಾವನ್ನಪ್ಪಿದ್ದಾರೆ ಎಂದು ಐಜಿಪಿ ರವಿಕಾಂತೇಗೌಡ ತಿಳಿಸಿದ್ದಾರೆ. ೧೨ ಮಂದಿ ಗಾಯಾಳುಗಳನ್ನು ಹಿರಿಯೂರು ಆಸ್ಪತ್ರೆ, ೯ ಮಂದಿ ಸಿರಾ ಆಸ್ಪತ್ರೆ, ಹಾಗೂ ಮೂವರನ್ನು ತುಮಕೂರು ಆಸ್ಪತ್ರೆಗೆ ಸೇರಿಸಲಾಗಿದೆ ಎಂದು ಮಾಹಿತಿ ನೀಡಿದರು. ಈ ಮಧ್ಯೆ ಸಿರಾ ಆಸ್ಪತ್ರೆಗೆ ದಾಖಲಾಗಿದ್ದ ಒಬ್ಬರನ್ನು ಹೆಚ್ಚಿನ ಚಿಕಿತ್ಸೆಗೆ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಲಾಗಿದ್ದು, ಗಾಯಾಳುಗಳು ಬಹುತೇಕ ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು

ತಿಳಿಸಿದ್ದಾರೆ. ಮೃತಪಟ್ಟವರ ಕುಟುಂಬಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ೫ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿ ನೆರವು ಒದಗಿಸುವುದಾಗಿ ತಿಳಿಸಿದ್ದಾರೆ. ಘಟನೆ ಬಗ್ಗೆ ತನಿಖೆ ನಡೆಸಿ ನೈಜ ಕಾರಣವನ್ನು ಪತ್ತೆ ಹಚ್ಚಲಾಗುವುದು. ಗಾಯಗೊಂಡವರು ಶೀಘ್ರ ಚೇತರಿಸಿಕೊಳ್ಳಲಿ ಎಂದು ಅವರು ಪ್ರಾರ್ಥಿಸಿದ್ದಾರೆ. ಚಿತ್ರದುರ್ಗದಲ್ಲಿ ಸಂಭವಿಸಿದ ರಸ್ತೆ ಅಪಘಾತದ ಜೀವ ಹಾನಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ಇದೊಂದು ದುರಂತವಾಗಿದ್ದು, ಜೀವ ಕಳೆದುಕೊಂಡ ಕುಟುಂಬಗಳಿಗೆ ಸಾಂತ್ವಾನ ಹೇಳಿದ್ದಾರೆ. ಗಾಯಗೊಂಡವರು ಶೀಘ್ರ ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು, ಕೂಡ ಈ ಘಟನೆಗೆ ಸಂತಾಪ ಸೂಚಿಸಿದ್ದು, ಮೃತಪಟ್ಟ ಕುಟುಂಬಗಳಿಗೆ ಪ್ರಧಾನಮಂತ್ರಿ ರಾಷ್ಟ್ರೀಯ ಪರಿಹಾರ ನಿಧಿಯಿಂದ ೨ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿ ನೆರವು ನೀಡುವುದಾಗಿ ತಿಳಿಸಿದ್ದಾರೆ.

**<><*<><>*><>**

ಮಾಜಿ ಪ್ರಧಾನಿ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಅವರ ೧೦೧ನೇ ಜನ್ಮ ದಿನಾಚರಣೆಯ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಇಂದು ಲಕ್ನೋಗೆ ಭೇಟಿ ನೀಡಲಿದ್ದಾರೆ. ಮಧ್ಯಾಹ್ನ ೨:೩೦ ಕ್ಕೆ ಪ್ರಧಾನಿ ಅವರು ರಾಷ್ಟ್ರ ಪ್ರೇರಣಾ ಸ್ಥಳವನ್ನು ಉದ್ಘಾಟಿಸಿ, ಈ ಸಂದರ್ಭದಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಸ್ವಾತಂತ್ರ ಭಾರತದ ದಿಗ್ಗಜರ ಪರಂಪರೆಯನ್ನು ಗೌರವಿಸುವ ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯಿಂದ ಪ್ರೇರಿತವಾಗಿರುವ ಈ ರಾಷ್ಟ್ರ ಪ್ರೇರಣಾ ಸ್ಥಳ ಭಾರತದ ಅತ್ಯಂತ ಪ್ರಬುದ್ಧ ರಾಜಕಾರಣಿಗಳಲ್ಲಿ ಒಬ್ಬರ ಜೀವನ, ಆದರ್ಶಗಳು ಮತ್ತು ಶಾಶ್ವತ ಪರಂಪರೆಗೆ ಗೌರವ ಸಲ್ಲಿಸಲಿದೆ. ಅವರ ನಾಯಕತ್ವವು ದೇಶದ ಪ್ರಜಾಪ್ರಭುತ್ವ, ರಾಜಕೀಯ ಮತ್ತು ಅಭಿವೃದ್ಧಿ ಪ್ರಯಾಣದ ಮೇಲೆ ಆಳವಾದ ಪ್ರಭಾವ ಬೀರಿದೆ. "ರಾಷ್ಟ್ರ ಪ್ರೇರಣಾ ಸ್ಥಳವನ್ನು ರಾಷ್ಟ್ರೀಯ ಮಹತ್ವವನ್ನು ಹೊಂದಿರುವ ಒಂದು ಹೆಗ್ಗುರುತು ರಾಷ್ಟ್ರೀಯ ಸ್ಮಾರಕ ಮತ್ತು ಸ್ಫೂರ್ತಿದಾಯಕ ಸಂಕೀರ್ಣವಾಗಿ ಅಭಿವೃದ್ಧಿಪಡಿಸಲಾಗಿದೆ. ಅಂದಾಜು ೨೩೦ ಕೋಟಿ ರೂಪಾಯಿ ವೆಚ್ಚದಲ್ಲಿ ಇದನ್ನು ನಿರ್ಮಿಸಲಾಗಿದ್ದು, ೬೫ ಎಕರೆ ವಿಸ್ತೀರ್ಣದಲ್ಲಿ ಹರಡಿಕೊಂಡಿದೆ. ಈ ಸಂಕೀರ್ಣವನ್ನು ನಾಯಕತ್ವ ಮೌಲ್ಯಗಳು, ರಾಷ್ಟ್ರೀಯ ಸೇವೆ, ಸಾಂಸ್ಕೃತಿಕ ಪ್ರಜ್ಞೆ ಮತ್ತು ಸಾರ್ವಜನಿಕ ಸ್ಫೂರ್ತಿಯನ್ನು ಬೆಳೆಸಲು ಮೀಸಲಾಗಿರುವ ಶಾಶ್ವತ ರಾಷ್ಟ್ರೀಯ ಆಸ್ತಿಯಾಗಿ ಕಲ್ಪಿಸಲಾಗಿದೆ. ಈ ಸಂಕೀರ್ಣದಲ್ಲಿ ಡಾ. ಶ್ಯಾಮ ಪ್ರಸಾದ್ ಮುಖರ್ಜಿ, ಪಂಡಿತ್ ದೀನದಯಾಳ್ ಉಪಾಧ್ಯಾಯ ಮತ್ತು ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ೬೫ ಅಡಿ ಎತ್ತರದ ಕಂಚಿನ ಪ್ರತಿಮೆಗಳಿವೆ. ಇದು

ಭಾರತದ ರಾಜಕೀಯ ಚಿಂತನೆ, ರಾಷ್ಟ್ರ ನಿರ್ಮಾಣ ಮತ್ತು ಸಾರ್ವಜನಿಕ ಜೀವನಕ್ಕೆ ಅವರ ಪ್ರಮುಖ ಕೊಡುಗೆಗಳನ್ನು ಸಂಕೇತಿಸುತ್ತದೆ. ಇಲ್ಲಿ ಕಮಲದ ಆಕಾರದ ರಚನೆಯ ರೂಪದಲ್ಲಿ ವಿನ್ಯಾಸಗೊಳಿಸಲಾದ ಅತ್ಯಾಧುನಿಕ ವಸ್ತುಸಂಗ್ರಹಾಲಯ ಕೂಡ ಇದೆ. ಇದು ಸುಮಾರು ೯೮ ಸಾವಿರ ಚದರ ಅಡಿ ವಿಶಾಲವಾದ ಪ್ರದೇಶದಲ್ಲಿ ತಲೆ ಎತ್ತಿದೆ.

**<><*<><>*><>**

ಇಂದು ಮಾಜಿ ಪ್ರಧಾನಿ ದಿವಂಗತ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನ. ರಾಷ್ಟ್ರ ನಿರ್ಮಾಣ ಹಾಗೂ ಉತ್ತಮ ಆಡಳಿತಕ್ಕಾಗಿ ತಮ್ಮ ಜೀವನವನ್ನು ಸಮರ್ಪಿಸಿಕೊಂಡಿದ್ದರು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ವಾಜಪೇಯಿ ಅವರು ಪ್ರಬಲ ವಾಗ್ಮಿಯಾಗಿ ಜನ ಮಾನಸದಲ್ಲಿ ನೆಲೆಯೂರಿದ್ದಾರೆ. ಅವರು ಉತ್ತಮ ಕವಿಯೂ ಆಗಿದ್ದರು. ತಮ್ಮ ವ್ಯಕ್ತಿತ್ವ, ಕೆಲಸ, ನಾಯಕತ್ವದ ಮೂಲಕ ಸರ್ವಾಂಗೀಣ ಅಭಿವೃದ್ಧಿ ಕಾರ್ಯಗಳಿಂದ ಅತ್ಯುತ್ತಮ ನಾಯಕಗಾಗಿ ಹೊರಹೊಮ್ಮಿದ್ದರು ಎಂದು ಹೇಳಿದ್ದಾರೆ.

**<><*<><>*><>**

ಮಾಜಿ ಪ್ರಧಾನಿ ದಿವಂಗತ ಅಟಲ್ ಬಿಹಾರಿ ವಾಜಪೇಯಿ ಅವರಿಗೆ ಸಂಸತ್ ಭವನದಲ್ಲಿ ಗೌರವ ಸಲ್ಲಿಸಲಾಯಿತು. ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ರಾಜ್ಯಸಭೆ ಉಪಸಭಾಪತಿ ಹರಿವಂಶ್, ರಾಜ್ಯಸಭೆಯ ಸಭಾ ನಾಯಕ ಜೆ.ಪಿ. ನಡ್ಡಾ, ಕೇಂದ್ರ ಸಚಿವರಾದ ಕಿರಣ್ ರಿಜಿಜು, ಅರ್ಜುನ್ ರಾಮ್ ಮೇಘ್ವಾಲ್, ಜಿತೇಂದ್ರ ಸಿಂಗ್ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಸಂವಿಧಾನ ಸದನದಲ್ಲಿ ಗಣ್ಯರು ವಾಜಪೇಯಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು.

**<><*<><>*><>**

ಇಂದು ಭಾರತ ರತ್ನ, ಮಹಾಮನ ಪಂಡಿತ್ ಮದನ್ ಮೋಹನ್ ಮಾಳವೀಯ ಅವರ ಜನ್ಮದಿನ. ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಮಾಳವೀಯ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಅವರು ಅಪಾರ ಜ್ಞಾನ ಹೊಂದಿದ ಬದ್ಧತೆಯುಳ್ಳ ಹಾಗೂ ಹೊಸ ಪರಂಪರೆಯನ್ನು ಸೃಷ್ಟಿಸಿದ ಸಮಾಜ ಸುಧಾರಕರಾಗಿದ್ದರು ಎಂದು ನೆನಪು ಮಾಡಿಕೊಂಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಮಾಧ್ಯಮದ ಮೂಲಕ ಅವರನ್ನು ಗೌರವದಿಂದ ಸ್ಮರಿಸಿಕೊಂಡಿದ್ದಾರೆ. ತಾಯ್ನೆಲದ ಸೇವೆಗಾಗಿ ತಮ್ಮ ಬದುಕನ್ನ ಅವರು ಸಮರ್ಪಿಸಿಕೊಂಡಿದ್ದರು. ಸಾಮಾಜಿಕ ಸುಧಾರಣೆಗಳ ಜೊತೆಗೆ ರಾಷ್ಟ್ರೀಯ ಪ್ರಜ್ಞೆಯನ್ನು ಬಡಿದೆಚ್ಚರಿಸುವಲ್ಲಿ ಅವರು, ನಿರ್ಣಾಯಕ ಪಾತ್ರ ವಹಿಸಿದ್ದರು.

ದಾಸ್ಯ ಸಂಕೋಲೆಯನ್ನು ಕಳೆಚಲು ತಮ್ಮದೇ ಆದ ಕೊಡುಗೆ ನೀಡಿದ್ದರು. ದೇಶದ ಶಿಕ್ಷಣ ವ್ಯವಸ್ಥೆಗೆ ಪಂಡಿತ್ ಮದನ್ ಮೋಹನ್ ಮಾಳವೀಯ ಅಪರಣಿತ ಕೊಡುಗೆ ನೀಡಿದ್ದಾರೆ ಎಂದು ಪ್ರಧಾನಿ ಹೇಳಿದ್ದಾರೆ.

**<><*<><>*><>**

ಇಂದು ಕ್ರಿಸ್‌ಮಸ್ ಹಬ್ಬವನ್ನು ಜಗತ್ತಿನಾದ್ಯಂತ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಎಲ್ಲೆಡೆ ಕ್ರಿಸ್‌ಮಸ್ ಟ್ರೀ ಅಳವಡಿಸಿ ಏಸುಕ್ರಿಸ್ತನ ಸಂಕೇತಗಳನ್ನು ಪ್ರತಿಬಿಂಬಿಸುವ ಪ್ರತಿರೂಪಗಳನ್ನು ನಿರ್ಮಿಸಿ ಕ್ರಿಸ್ತನ ಆರಾಧನೆ ಮಾಡಲಾಗುತ್ತಿದೆ. ಪರಸ್ಪರ ಉಡುಗೊರೆಗಳನ್ನು ವಿನಿಮಯ ಮಾಡಿಕೊಂಡು ಹಬ್ಬವನ್ನು ಸಡಗರದಿಂದ ಆಚರಿಸಲಾಗುತ್ತದೆ. ಕಳೆದ ಮೇನಲ್ಲಿ ಪೋಪ್ ಲಿಯೋ ಅವರು, ಆಯ್ಕೆಯಾಗಿದ್ದು, ಕ್ರಿಸ್‌ಮಸ್‌ಅನ್ನು ಮತ್ತಷ್ಟು ಸಂಭ್ರಮಿಸುವಂತೆ ಮಾಡಿದೆ. ಕ್ರಿಸ್‌ಮಸ್‌ಗೆ ಶುಭ ಕೋರಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಭಗವಾನ್ ಕ್ರಿಸ್ತರು ದೇಶದ ಮಾನವೀಯತೆಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಅವರ ತ್ಯಾಗ ಸದಾ ಪ್ರೇರಣೀಯ, ಶಾಂತಿ, ಸೌಹಾರ್ದತೆ, ಸಮಾನತೆಯ ಸೇವಾ ಗುಣಗಳು ಜನರಿಗೆ ಸ್ಪೂರ್ತಿಯಾಗಿದ್ದು, ಈ ಮೌಲ್ಯಗಳನ್ನು ಏಸುಕ್ರಿಸ್ತರು ಬಲಗೊಳಿಸಿದ್ದಾರೆ ಎಂದು ಹೇಳಿದ್ದಾರೆ. ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಕ್ರೈಸ್ತ ಸಮುದಾಯ ಸೇವಾ ಚಟುವಟಿಕೆಗಳಿಗೆ ಹೆಸರಾಗಿದೆ. ಸಾಮಾಜಿಕ ಬಾಂಧವ್ಯವನ್ನು ಬಲಗೊಳಿಸುವ ಹಾಗೂ ಸಮಾಜದಲ್ಲಿ ಶಾಂತಿ ನೆಲೆಸಲು ಕ್ರೈಸ್ತರ ಕೊಡುಗೆ ಗಣನೀಯವಾಗಿದೆ ಎಂದು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಶಾಂತಿ, ಭರವಸೆಯ ಸಂಕೇತವಾದ ಕ್ರಿಸ್‌ಮಸ್ ಎಲ್ಲರಲ್ಲೂ ಸಂತಸ ತರಲಿ. ಏಸುಕ್ರಿಸ್ತರು ಸಮಾಜದಲ್ಲಿ ಸೌಹಾರ್ದತೆಯನ್ನು ಬಲಪಡಿಸಲು ಎಂದು ಆಶಿಸಿದ್ದಾರೆ.

**<><*<><>*><>**

ಸಂಸದರ ಕ್ರೀಡಾಮಹೋತ್ಸವ ಕಾರ್ಯಕ್ರಮದಿಂದ ದೇಶಾದ್ಯಂತ ಅತ್ಯುತ್ತಮ ಕ್ರೀಡಾಪಟುಗಳನ್ನು ಪತ್ತೆ ಮಾಡಲು ನೆರವಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಂಸದ್ ಖೇಲೋ ಮಹೋತ್ಸವ ಉದ್ದೇಶಿಸಿ ವಿಡಿಯೋ ಸಂವಾದದಲ್ಲಿ ಭಾಗವಹಿಸಿದ ಅವರು, ಸಂಸದರ ಕ್ರೀಡಾಮಹೋತ್ಸವಕ್ಕೆ ಗಣನೀಯ ಬೆಂಬಲ ದೊರೆಯುತ್ತಿದೆ. ಕ್ರೀಡಾ ಹಬ್ಬ ದೇಶದ ಪ್ರಗತಿ ಹಾಗೂ ಯುವ ಸಮೂಹದ ಶ್ರೇಯೋಭಿವೃದ್ಧಿಗೆ ಪ್ರಧಾನ ಆಧಾರ ಸ್ತಂಭವಾಗಿದೆ. ಕ್ರೀಡೆಯಲ್ಲಿ ಸೋಲು, ಗೆಲುವು ಸಾಮಾನ್ಯ. ಎಲ್ಲವನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವ ಕ್ರೀಡೆಯಲ್ಲಿ ಮಾತ್ರ ಬೆಳೆಯಲು ಸಾಧ್ಯ. ದೇಶದ ಅಥ್ಲೆಟ್‌ಗಳು ಅಭಿವೃದ್ಧಿಗೆ ಕೊಡುಗೆ ನೀಡುತ್ತಿದ್ದು, ಯುವ ಸಮೂಹದಲ್ಲಿ ಶಿಸ್ತು ರೂಪಿಸಲು ನೆರವಾಗುತ್ತಿದ್ದಾರೆ ಎಂದು ಹೇಳಿದರು.

**ಧ್ವನಿ: ಪ್ರಧಾನಿ ( ೨೪ ಸೆಕೆಂಡ್ಸ್)**

**<><*<><>*><>**

ಆಂಧ್ರಪ್ರದೇಶದಲ್ಲಿ ವಿಜಯವಾಡದಲ್ಲಿ ನಡೆಯುತ್ತಿರುವ ೮೭ನೇ ಹಿರಿಯರ ರಾಷ್ಟ್ರೀಯ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಉನ್ನತಿ ಹೂಡಾ, ತನ್ವಿ ಶರ್ಮಾ, ರೌನಕ್ ಚೌಹಾಣ್ ಮತ್ತು ಸಂಸ್ಕಾರ್ ಸಾರಸ್ವತ್ ಅವರು ಭರ್ಜರಿ ಗೆಲುವು ಸಾಧಿಸಿ ಮುಂದಿನ ಹಂತಕ್ಕೆ ಮುನ್ನಡೆದಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ <>*><>**